## ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1204** |
| ಸದಸ್ಯರ ಹೆಸರು | : | ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | **16-03-2020** |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದಾಗಿ ಶಾಲಾ ಮಕ್ಕಳ ಶೈಕ್ಷಣಿಕ ಗುಣಮಟ್ಟ ಕಡಿಮೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರವು ಕೈಗೊಂಡ ಕ್ರಮಗಳೇನು; | ಬಂದಿದೆ.<br>ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಬೋಧಕರ ವೃಂದದ ಒಟ್ಟು 24891 ಹುದ್ದೆಗಳು ಖಾಲಿ ಇದ್ದು, ಆ ಪೈಕಿ ಒಟ್ಟು ಸಹ ಶಿಕ್ಷಕರ ಖಾಲಿ ಹುದ್ದೆಗಳು 22150 ಇರುತ್ತವೆ. 2019-20ನೇ ಸಾಲಿಗೆ ಖಾಲಿ ಇರುವ 22150 ಹುದ್ದೆಗಳಿಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಒಟ್ಟು 17494 ಅತಿಥಿ ಶಿಕ್ಷಕರನ್ನು ಶೈಕ್ಷಣಿಕ ವರ್ಷಾಂತ್ಯದವರೆಗೆ ನೇಮಕಾತಿ ಮಾಡಿಕೊಳ್ಳಲಾಗಿದೆ. ಈಗಾಗಲೇ ರಾಜ್ಯದ ಸರ್ಕಾರಿ ಶಾಲೆಗಳ ಖಾಲಿ ಇದ್ದ ಒಟ್ಟು 10565 ಹುದ್ದೆಗಳಿಗೆ ಪದವೀಧರ ಶಿಕ್ಷಕರನ್ನು ನೇಮಿಸಿಕೊಳ್ಳಲು ಜಿಲ್ಲಾವಾರು ಅಧಿಸೂಚನೆ ಹೊರಡಿಸಿ, ಸದರಿ ನೇಮಕಾತಿ ಪ್ರಕ್ರಿಯೆಯಲ್ಲಿ ಒಟ್ಟು 1994 ಅಭ್ಯರ್ಥಿಗಳು ಆಯ್ಕೆಯಾಗಿರುತ್ತಾರೆ.<br>ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ 3451 ಅತಿಥಿ ಶಿಕ್ಷಕರನ್ನು ನೇಮಿಸಿಕೊಂಡು ಶೈಕ್ಷಣಿಕ ಪ್ರಕ್ರಿಯೆಗೆ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ. |
| ಆ. | ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಅಗತ್ಯ ಶಾಲಾ ಶಿಕ್ಷಕರ ನೇಮಕಾತಿ ಮಾಡಲು ಸರ್ಕಾರವು ಕ್ರಮಕೈಗೊಳ್ಳುವುದೇ; ಇದಕ್ಕೆ ಬೇಕಾಗುವ ಕಾಲಾವಧಿ ಎಷ್ಟು? | 2019-20ನೇ ಸಾಲಿನಲ್ಲಿ ನಡೆದ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯಲ್ಲಿ ಒಟ್ಟು 1994 ಅಭ್ಯರ್ಥಿಗಳು ಆಯ್ಕೆಯಾಗಿದ್ದು, ಉಳಿದ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.<br>ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

**ಇಪಿ 14 ಪಿಎಂಎ 2020**

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.